ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

ಸಂಖ್ಯೆ:ಕಾಶಿಇ/ವಿಯೋ/31/placement cell/2014-15 ದಿನಾಂಕ: 16.05.2017

## ಅಧಿಕೃತ ಜ್ಞಾಪನ ಪತ್ರ

ಕರ್ನಾಟಕ ಲೋಕಸೇವಾ ಆಯೋಗದಿಂದ ಗೆಜೆಟೆಡ್ ಪ್ರೋಬೇಷನರ್ಸ್ 2015ನೇ ಸಾಲಿನ 401 ಹುದ್ದೆಗಳನ್ನು ಭರ್ತಿ ಮಾಡಲು ನಡೆಸುವ ಪೂರ್ವ ಭಾವಿ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳಿಂದ On-line ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

- ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 12-06-2017
- ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 13-06-2017
- ಪೂರ್ವಭಾವಿ ಪರೀಕ್ಷೆಯು ದಿನಾಂಕ: 20-08-2017 ರಂದು ನಡೆಯಲಿದೆ.

ಪರೀಕ್ಷೆಯು ಎರಡು ಹಂತದಲ್ಲಿ ಒಳಗೊಂಡಿರುತ್ತದೆ.

1) ಪೂರ್ವಭಾವಿ ಪರೀಕ್ಷೆಯನ್ನು(Preliminary Exam) ಮುಖ್ಯ ಪರೀಕ್ಷೆಗೆ(Main Exam) ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ನಡೆಸಲಾಗುವುದು ಮತ್ತು
2) ಮುಖ್ಯ ಪರೀಕ್ಷೆಯನ್ನು ಮತ್ತು ವ್ಯಕ್ತಿತ್ವ ಪರೀಕ್ಷೆಯನ್ನು ವಿವಿಧ ಸೇವೆಗಳು ಮತ್ತು ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ನಡೆಸಲಾಗುವುದು.

ಹೆಚ್ಚಿನ ವಿವರಗಳಿಗೆ ಆಯೋಗದ ವೆಬ್‌ಸೈಟ್ http://kpsc.kar.nic.in ನಲ್ಲಿ ಲಭ್ಯವಿರುತ್ತದೆ.

ಕೇಂದ್ರಕಛೇರಿ : 080-30574957 / 30574901 /30575153 ಪ್ರಾಂತೀಯ ಕಛೇರಿ ಮೈಸೂರು : 0821 -2545956
ಬೆಳಗಾವಿ : 0831 – 2475345 ಗುಲಬರ್ಗಾ : 08472 – 227944 ಶಿವಮೊಗ್ಗ : 08182 – 228099

**ಶೈಕ್ಷಣಿಕ ವಿದ್ಯಾರ್ಹತೆ:**

ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾದ ಯಾವುದೇ ವಿಶ್ವವಿದ್ಯಾಲಯದ ಸ್ನಾತಕ ಅಥವಾ ಸ್ನಾತಕೋತ್ತರ ಪದವಿಯನ್ನು ಹೊಂದಿರತಕ್ಕದ್ದು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

*ಪರಂತು, ಅಭ್ಯರ್ಥಿಗಳು ಯಾವುದಾದರೂ ಪರೀಕ್ಷೆಗೆ ಹಾಜರಾಗಿದ್ದು, ಆಯೋಗವು ನಡೆಸುವ ಪೂರ್ವಭಾವಿ ಪರೀಕ್ಷೆಗೆ ಶೈಕ್ಷಣಿಕವಾಗಿ ಅರ್ಹರಾಗುವುದಾದಲ್ಲಿ, ಆದರೆ ಆ ಪರೀಕ್ಷೆಯ ಫಲಿತಾಂಶ ಪ್ರಕಟಗೊಳ್ಳದೇ ಇದ್ದಲ್ಲಿ, ಅಂತಹ ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.*

*Provided that, Candidates who have appeared for an Examination, passing of which would render them educationally qualified for Preliminary examination conducted by the Commission, but the results of which have not been declared, are also eligible for admission to such Preliminary examination.*

ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಂತಿಮ ವರ್ಷದ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸ್ನಾತಕೋತ್ತರ ಪದವಿಯಲ್ಲಿನ ವಿದ್ಯಾರ್ಥಿಗಳ ಗಮನಕ್ಕೆ ತರಲು, ಅರ್ಹ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಹಾಗೂ ಸದರಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಸಂಬಂಧಿಸಿದಂತೆ ವಿಶೇಷ ತರಗತಿಗಳನ್ನು ಹಮ್ಮಿಕೊಳ್ಳಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು(ಪ್ರ)

ಇವರಿಗೆ,

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗಾ, ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಸಂಬಂಧಪಟ್ಟ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರವರ್ತಕ ಪ್ರಾಂಶುಪಾಲರುಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ಸಂಬಂಧಪಟ್ಟ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ಸಂಬಂಧಪಟ್ಟ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ Placement Cell ನ ಸಂಚಾಲಕರು – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ – ಮಾಹಿತಿಗಾಗಿ ಹಾಗೂ ಆದೇಶವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6. ಕಛೇರಿ ಪ್ರತಿ.